**Akashvani: Bangalore**
**National Bulletin In Kannada**
**06.01.2025 / 13.10 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**06.01.2025 / 13.10 hrs**

**<><*<><>*><>**

ಮುಖ್ಯಾಂಶಗಳು

೧. ವಿವಿಧ ರೈಲ್ವೆ ಯೋಜನೆಗಳಿಗೆ ವರ್ಚುವಲ್ ಮೂಲಕ ಪ್ರಧಾನಿ ಹಸಿರು ನಿಶಾನೆ

೨. ಕರ್ನಾಟಕದಲ್ಲಿ ೨ ಹೆಚ್‌ಎಂಪಿ ವೈರಾಣು ಪ್ರಕರಣ ಪತ್ತೆ ; ಆರೋಗ್ಯ ಇಲಾಖೆಯಿಂದ ಮಾರ್ಗಸೂಚಿ ಬಿಡುಗಡೆ

೩. ಇಂದು ಗುರು ಗೋಬಿಂದ್ ಸಿಂಗ್ ೩೫೮ನೇ ಜನ್ಮ ಸ್ಮರಣೆ ; ದೇಶಾದ್ಯಂತ ಪ್ರಕಾಶ್ ಪರ್ವ ಆಚರಣೆ

೪. ಇಂಡಿಯನ್ ಸೂಪರ್ ಲೀಗ್ ಫುಟ್ಬಾಲ್ ; ಇಂದು ಈಸ್ಟ್ ಬೆಂಗಾಲ್ ಎಫ್‌ಸಿ, ಮುಂಬೈ ಸಿಟಿ ಎಫ್‌ಸಿ ಮುಖಾಮುಖಿ

**<><*<><>*><>**

ಪ್ರಧಾನಿ ನರೇಂದ್ರ ಮೋದಿ ಇಂದು ದೇಶದ ವಿವಿಧ ರೈಲ್ವೆ ಯೋಜನೆಗಳ ಉದ್ಘಾಟನೆ ಮತ್ತು ಶಂಕುಸ್ಥಾಪನಾ ಕಾರ್ಯಕ್ರಮದಲ್ಲಿ ವಿಡಿಯೋ ಕಾನ್ಫರೆನ್ಸ್ ಮೂಲಕ ಭಾಗಿಯಾಗಿದ್ದಾರೆ. ಕಾರ್ಯಕ್ರಮದಲ್ಲಿ ಅವರು, ಜಮ್ಮು ವಿಭಾಗದಲ್ಲಿ ಸಂಪರ್ಕವನ್ನು ಮತ್ತಷ್ಟು ಹೆಚ್ಚಿಸುವ ಉಪಕ್ರಮವಾಗಿ ಜಮ್ಮು ರೈಲ್ವೆ ವಿಭಾಗ, ತೆಲಂಗಾಣದ ಚಾರ್ಲಪಲ್ಲಿ ಹೊಸ ಟರ್ಮಿನಲ್ ನಿಲ್ದಾಣವನ್ನು ಸಹ ಉದ್ಘಾಟಿಸಿದರು ಹಾಗೂ ಪೂರ್ವ ಕರಾವಳಿ ರೈಲ್ವೆಯ ರಾಯಗಡ ರೈಲ್ವೆ ವಿಭಾಗದ ಕಟ್ಟಡದ ಶಂಕುಸ್ಥಾಪನೆಯನ್ನು ನೆರವೇರಿಸಿದರು. ಜಮ್ಮು ರೈಲ್ವೇ ವಿಭಾಗದ ರಚನೆಯಿಂದಾಗಿ ಜಮ್ಮು ಮತ್ತು ಕಾಶ್ಮೀರ ಮತ್ತು ಸುತ್ತಮುತ್ತಲಿನ ಪ್ರದೇಶಗಳಿಗೆ ಬಹಳ ಪ್ರಯೋಜನವಾಗುತ್ತದೆ, ಇದು ಜನರ ಬಹುಕಾಲದ ಆಕಾಂಕ್ಷೆಯನ್ನು ಈಡೇರಿಸುತ್ತದೆ. ಹಾಗೆಯೇ ಇದು ಪಠಾಣ್‌ಕೋಟ್ - ಜಮ್ಮು - ಉಧಮ್‌ಪುರ - ಶ್ರೀನಗರ - ಬಾರಾಮುಲ್ಲಾ, ಭೋಗ್‌ಪುರ ಸಿರ್ವಾಲ್ - ಪಠಾಣ್‌ಕೋಟ್, ಬಟಾಲಾ - ಪಠಾಣ್‌ಕೋಟ್ ಮತ್ತು ಪಠಾಣ್‌ಕೋಟ್‌ನಿಂದ ಜೋಗಿಂದರ್ ನಗರ ವಿಭಾಗಗಳನ್ನು ಒಳಗೊಂಡಿರುತ್ತದೆ. ಈ ವಿಭಾಗ ರಚನೆಯಿಂದ ಹೊಸ ಉದ್ಯೋಗಗಳು ರಚನೆಯಾಗುವ ಅವಕಾಶವಿದೆ, ಹಾಗೆಯೇ ಇದು ಮೂಲಸೌಕರ್ಯ ಅಭಿವೃದ್ಧಿ, ಪ್ರವಾಸೋದ್ಯಮವನ್ನು

ಉತ್ತೇಜಿಸುತ್ತದೆ ಮತ್ತು ಪ್ರದೇಶದ ಒಟ್ಟಾರೆ ಸಾಮಾಜಿಕ-ಆರ್ಥಿಕ ಅಭಿವೃದ್ಧಿಗೆ ಕಾರಣವಾಗುತ್ತದೆ. ತೆಲಂಗಾಣದ ಮೇಡ್ಚಲ್-ಮಲ್ಕಾಜ್‌ಗಿರಿ ಜಿಲ್ಲೆಯಲ್ಲಿರುವ ಚಾರ್ಲಪಲ್ಲಿ ಹೊಸ ಟರ್ಮಿನಲ್ ಸ್ಟೇಷನ್ ಅನ್ನು ಹೊಸ ಕೋಚಿಂಗ್ ಟರ್ಮಿನಲ್ ಆಗಿ ಅಭಿವೃದ್ಧಿಪಡಿಸಲಾಗಿದೆ. ಈ ಪರಿಸರ ಸ್ನೇಹಿ ಟರ್ಮಿನಲ್, ಉತ್ತಮ ಪ್ರಯಾಣಿಕ ಸೌಕರ್ಯಗಳನ್ನು ಹೊಂದಿದ್ದು, ಸಿಕಂದರಾಬಾದ್, ಹೈದರಾಬಾದ್ ಮತ್ತು ಕಾಚೆಗುಡದಂತಹ ನಗರದಲ್ಲಿ ಅಸ್ತಿತ್ವದಲ್ಲಿರುವ ಕೋಚಿಂಗ್ ಟರ್ಮಿನಲ್‌ಗಳ ಮೇಲೆ ದಟ್ಟಣೆಯನ್ನು ಕಡಿಮೆ ಮಾಡುತ್ತದೆ. ಪೂರ್ವ ಕರಾವಳಿ ರೈಲ್ವೆಯ ರಾಯಗಡ ರೈಲ್ವೇ ವಿಭಾಗದ ಕಟ್ಟಡವು ಒಡಿಶಾ, ಆಂಧ್ರಪ್ರದೇಶ ಮತ್ತು ಹತ್ತಿರದ ಪ್ರದೇಶಗಳಿಗೆ ಸಂಪರ್ಕವನ್ನು ಸುಧಾರಿಸುತ್ತದೆ ಮತ್ತು ಪ್ರದೇಶದ ಒಟ್ಟಾರೆ ಸಾಮಾಜಿಕ-ಆರ್ಥಿಕ ಅಭಿವೃದ್ಧಿಗೆ ಕಾರಣವಾಗುತ್ತದೆ. ಜಮ್ಮುವಿನಲ್ಲಿ ಉದ್ಘಾಟನೆಯಾಗಿರುವ ರೈಲ್ವೆ ವಿಭಾಗದ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಕೇಂದ್ರ ಸಚಿವ ಜಿತೇಂದ್ರ ಸಿಂಗ್ ಇದು ಜಮ್ಮುವಿಗೆ ಹೆಮ್ಮೆಯ ಮತ್ತು ಸಂತಸದ ವಿಷಯವಾಗಿದ್ದು, ಈ ಪ್ರದೇಶಕ್ಕೆ ರೈಲ್ವೆ ವಿಭಾಗದ ಅವಶ್ಯಕತೆಯಿತ್ತು ಎಂದರು.

ಧ್ವನಿ : ಜಿತೇಂದ್ರ ಸಿಂಗ್

<><*<><>*><>

ಭಾರತೀಯ ವೈದ್ಯಕೀಯ ಸಂಶೋಧನಾ ಸಮಿತಿ - ಐಸಿಎಮ್‌ಆರ್, ಕರ್ನಾಟಕದಲ್ಲಿ ಎರಡು ಹ್ಯೂಮನ್ ಮೆಟಾ ನ್ಯೂಮೋವೈರಸ್ - ಹೆಚ್‌ಎಮ್‌ಪಿವಿ ಪ್ರಕರಣಗಳನ್ನು ಪತ್ತೆಹಚ್ಚಿದೆ. ದೇಶಾದ್ಯಂತ ಉಸಿರಾಟದ ಕಾಯಿಲೆಗಳನ್ನು ಮೇಲ್ವಿಚಾರಣೆ ಮಾಡಲು Iಅಒಖ ನಡೆಯುತ್ತಿರುವ ಪ್ರಯತ್ನಗಳ ಭಾಗವಾಗಿ, ಈ ಎರಡೂ ಪ್ರಕರಣಗಳನ್ನು ಗುರುತಿಸಲಾಗಿದೆ. ಕರ್ನಾಟಕದಲ್ಲಿ ಸೋಂಕು ಪತ್ತೆ ಹಿನ್ನೆಲೆ ರಾಜ್ಯ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ನೇತೃತ್ವದಲ್ಲಿ ಅಧಿಕಾರಿಗಳ ತುರ್ತು ಸಭೆ ಕರೆಯಲಾಗಿದೆ. ಕರ್ನಾಟಕ ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮಾರ್ಗಸೂಚಿ ಹೊರಡಿಸಿದ್ದು, ಕಫ ಮತ್ತು ಸೀನುವಾಗ ಕರವಸ್ತ್ರ ಅಥವಾ ಟಿಶ್ಯು ಪೇಪರ್‌ನಿಂದ ಮುಖವನ್ನು ಮುಚ್ಚಿಕೊಳ್ಳುವುದು, ಕೈಗಳನ್ನು ಆಗಾಗ ಸೋಪು ಅಥವಾ ಸ್ಯಾನಿಟೈಜರ್‌ನಿಂದ ಶುಚಿಗೊಳಿಸುವುದು, ಜನಸಂದಣಿ ಪ್ರದೇಶಗಳಿಂದ ಅಂತರ ಕಾಪಾಡಿಕೊಳ್ಳುವುದು, ಸಾಕಷ್ಟು ನೀರು ಕುಡಿಯುವುದು ಹಾಗೂ ಪೌಷ್ಠಿಕಾಂಶಯುಕ್ತ ಆಹಾರ ಸೇವಿಸಲು ಸಲಹೆ ನೀಡಿದೆ. ಇದೇ ವೇಳೆ ಸಾರ್ವಜನಿಕ ಸ್ಥಳಗಳಲ್ಲಿ ಉಗುಳುವುದು, ವೈದ್ಯರನ್ನು ಸಂಪರ್ಕಿಸದೆ ಔಷಧಿ ಸೇವಿಸುವುದು ಹಾಗೂ ಕಣ್ಣು, ಮೂಗು ಮತ್ತು ಬಾಯಿಯನ್ನು ಆಗಾಗ್ಗೆ ಸ್ಪರ್ಶಿಸುವುದು ಸೇರಿದಂತೆ ಸೋಂಕು ಹರಡಲು ಸಹಕಾರಿಯಾಗುವಂತಹ ಯಾವುದೇ ಕ್ರಿಯೆಯಲ್ಲಿ ತೊಡಗದಂತೆ ಮುನ್ನೆಚ್ಚರಿಕೆ ವಹಿಸಬೇಕು ಎಂದು

ಸೂಚಿಸಲಾಗಿದೆ. ಎಚ್‌ಎಂಪಿವಿ ಹೊಸ ವೈರಸ್ ಅಲ್ಲ ಇದು ಅಸ್ಥಿತ್ವದಲ್ಲಿರುವ ವೈರಸ್ ಆಗಿದ್ದು, ಆತಂಕಪಡುವ ಅಗತ್ಯವಿಲ್ಲ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ.

ಈ ಕುರಿತು ಒಂದು ವರದಿ : ಅಭಯ್ ಧಾಮ್ಲೆ

ಹ್ಯೂಮನ್ ಮೆಟಾ ನ್ಯೂಮೊ ವೈರಾಣು ಹಾಗೂ ಇತರ ಶ್ವಾಸಕೋಶ ಸಂಬಂಧಿ ವೈರಾಣುಗಳಿಂದಾಗಿ ತಲೆದೂರುವ ಆರೋಗ್ಯ ಸವಾಲುಗಳ ವಿರುದ್ಧ ಸನ್ನದ್ಧತೆಯನ್ನು ಖಚಿತಪಡಿಸಿಕೊಳ್ಳುವಂತೆ ದೆಹಲಿ ಆರೋಗ್ಯ ಇಲಾಖೆ ಮಾರ್ಗಸೂಚಿ ಹೊರಡಿಸಿದೆ. ಎಲ್ಲಾ ಆಸ್ಪತ್ರೆಗಳಲ್ಲೂ ತೀವ್ರ ಶ್ವಾಸಕೋಶ ಸೋಂಕು ಪ್ರಕರಣಗಳು ಸೇರಿದಂತೆ ಇನ್ನಿತರ ಸಂಬಂಧಿತ ಖಾಯಿಲೆಗಳ ಕುರಿತಂತೆ ಸಮಗ್ರ ಆರೋಗ್ಯ ಮಾಹಿತಿ ವೇದಿಕೆ - ಐಹೆಚ್‌ಐಪಿ ಪೋರ್ಟಲ್ ಮೂಲಕ ವರದಿ ನೀಡುವಂತೆ ಎಲ್ಲಾ ಆಸ್ಪತ್ರೆಗಳಿಗೆ ಸೂಚಿಸಲಾಗಿದೆ.

<><*<><>*><>

ದೇಶಾದ್ಯಂತ ಇಂದು ಶ್ರೀ ಗುರು ಗೋಬಿಂದ್ ಸಿಂಗ್ ಜಿ ಮಹಾರಾಜ್ ಅವರ ೩೫೮ನೇ ಜನ್ಮ ವರ್ಷಾಚರಣೆ, ಪ್ರಕಾಶ್ ಪರ್ವವನ್ನು ಆಚರಿಸಲಾಗುತ್ತಿದೆ. ಬಿಹಾರದ ಪಾಟ್ನಾ ಸಾಹೀಬ್‌ನಲ್ಲಿ ಸಾಂಪ್ರದಾಯಿಕ ಸಂಭ್ರಮಾಚರಣೆಗಳು ಕಳೆಗಟ್ಟಿವೆ. ಪಂಜಾಬ್‌ನ ಅಮೃತ್‌ಸರ್‌ದಲ್ಲಿರುವ ಹರಿಮಂದಿರ್ ಸಾಹೀಬ್ ಗೋಲ್ಡ್‌ನ್ ಟೆಂಪಲ್‌ಗೆ ನಮನ ಸಲ್ಲಿಸಲು ದೇಶ-ವಿದೇಶಗಳಿಂದ ಇಂದು ಭಕ್ತಾದಿಗಳು ಆಗಮಿಸುತ್ತಾರೆ. ಪ್ರಕಾಶ್ ಪರ್ವದ ಸಂದರ್ಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು, ದೇಶದ ಜನತೆಗೆ ಶುಭಾಶಗಳನ್ನು ಕೋರಿದ್ದು, ಮನುಕುಲದ ಒಳಿತಿಗಾಗಿ ಇದ್ದ ಗುರು ಗೋಬಿಂದ್ ಸಿಂಗ್‌ರ ನಿಸ್ವಾರ್ಥ ಶ್ರದ್ಧೆ ಎಲ್ಲರಿಗೂ ಸ್ಫೂರ್ತಿದಾಯಕ ಎಂದು ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ. ಪ್ರಕಾಶ್ ಪರ್ವ ಹಿನ್ನೆಲೆ ಪ್ರಧಾನಿ ನರೇಂದ್ರ ಮೋದಿ, ಗುರು ಗೋಬಿಂದ್ ಸಿಂಗ್‌ರಿಗೆ ಗೌರವ ನಮನ ಸಲ್ಲಿಸಿದ್ದು, ಗುರು ಗೋಬಿಂದ್ ಸಿಂಗ್‌ರ ಚಿಂತನೆಗಳು ಅಭಿವೃದ್ಧಿಪರ ಸಮೃದ್ಧ ಸಮಾಜ ನಿರ್ಮಾಣಕ್ಕೆ ನಾಗರಿಕರನ್ನು ಎಂದಿಗೂ ಪ್ರೇರೇಪಿಸುತ್ತದೆ ಎಂದಿದ್ದಾರೆ.

<><*<><>*><>

ದೆಹಲಿಯಲ್ಲಿಂದು ಕೇಂದ್ರ ಹಣಕಾಸು ಮತ್ತು ಕಾರ್ಪೋರೇಟ್ ವ್ಯವಹಾರಗಳ ಸಚಿವ ನಿರ್ಮಲಾ ಸೀತಾರಾಮನ್ ಲನೇ ಪೂರ್ವಬಜೆಟ್ ಸಮಾಲೋಚನಾ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಸಭೆಯಲ್ಲಿ ಕೇಂದ್ರ ಹಣಕಾಸು ಖಾತೆ ರಾಜ್ಯ ಸಚಿವ ಪಂಕಜ್ ಚೌಧರಿ, ಹಣಕಾಸು ಕಾರ್ಯದರ್ಶಿಗಳು, ಮುಖ್ಯ ಆರ್ಥಿಕ ಸಲಹೆಗಾರರು, ಹೂಡಿಕೆ ಮತ್ತು ಸಾರ್ವಜನಿಕ ಆಸ್ತಿ ನಿರ್ವಹಣಾ ಇಲಾಖೆ, ಆರ್ಥಿಕ ವ್ಯವಹಾರಗಳ ಇಲಾಖೆ ಕಾರ್ಮಿಕ ಇಲಾಖೆ ಹಾಗೂ ಮತ್ತಿತರ ಅಧಿಕಾರಿಗಳು ಭಾಗವಹಿಸಿದ್ದರು.

<><*<><>*><>

ನವದೆಹಲಿಯಲ್ಲಿಂದು ಕೇಂದ್ರ ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್ ಮತ್ತು ಅಮೆರಿಕ ರಾಷ್ಟ್ರೀಯ ಭದ್ರತಾ ಸಲಹೆಗಾರ ಜೇಕ್ ಸುಲ್ಲಿವನ್ ಸಭೆ ನಡೆಸಿದರು. ಸಭೆಯಲ್ಲಿ ಪ್ರಾದೇಶಿಕ ಮತ್ತು ಜಾಗತಿಕ ಸಹಕಾರ ಹಾಗೂ ದ್ವಿಪಕ್ಷೀಯ ಸಂಬಂಧಗಳನ್ನು ಬಲಪಡಿಸುವ ಕುರಿತಂತೆ ಚರ್ಚಿಸಲಾಗಿದೆ. ಈ ಕುರಿತಂತೆ ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿರುವ ಡಾ. ಎಸ್. ಜೈಶಂಕರ್ ಭಾರತ-ಅಮೆರಿಕ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುವುದು ಜೇಕ್ ಸುಲ್ಲಿವನ್ ಅವರ ಕೊಡುಗೆಯನ್ನು ಶ್ಲಾಘಿಸಿದ್ದಾರೆ. ಜೇಕ್ ಸುಲ್ಲಿವನ್ ನವದೆಹಲಿಯಲ್ಲಿಂದು ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೊವಲ್ ಅವರನ್ನು ಭೇಟಿಯಾಗಲಿದ್ದಾರೆ. ಸಭೆಯಲ್ಲಿ ನಿರ್ಣಾಯಕ ಹಾಗೂ ಉದಯೋನ್ಮುಖ ತಂತ್ರಜ್ಞಾನ ಮತ್ತು ಇನ್ನಿತರ ದ್ವಿಪಕ್ಷೀಯ ಸಮಸ್ಯೆಗಳ ಕುರಿತು ವ್ಯಾಪಕ ಚರ್ಚೆ ನಡೆಯಲಿದೆ.

<><*<><>*><>

ಉತ್ತರ ಭಾರತದಲ್ಲಿ ಶೀತಅಲೆ ಪರಿಸ್ಥಿತಿ ಮುಂದುವರೆದಿದೆ. ಜಮ್ಮು-ಕಾಶ್ಮೀರ, ಲಡಾಖ್, ಗಿಲ್ಗಿಟ್, ಬಾಲ್ಟಿಸ್ತಾನ್ ಮತ್ತು ಮುಜಾಫರಾಬಾದ್‌ನಲ್ಲಿ ಮುಂದಿನ ೪ ರಿಂದ ೫ ದಿನಗಳಲ್ಲಿ ಕನಿಷ್ಠ ತಾಪಮಾನ ನಾಲ್ಕರಿಂದ ೫ ಡಿಗ್ರಿ ಸೆಲ್ಸಿಯೆಸ್ ಇಳಿಮುಖವಾಗುವ ಸಾಧ್ಯತೆಯಿದೆ ಎಂದು ಹವಮಾನ ಇಲಾಖೆ ಮುನ್ಸೂಚನೆ ನೀಡಿದೆ. ಹಿಮಾಚಲ ಪ್ರದೇಶದಲ್ಲಿಂದು ಗುಡುಗು ಮಿಂಚು ಸಹಿತ ಭಾರೀ ಮಳೆಯಾಗುವ ಸಾಧ್ಯತೆಯಿದೆ. ದಟ್ಟ ಮಂಜುಮುಸುಕುವ ಪರಿಸ್ಥಿತಿ ಉತ್ತರ ಹಾಗೂ ಈಶಾನ್ಯ ರಾಜ್ಯಗಳಲ್ಲಿ ಮುಂದಿನ ೨ ದಿನಗಳವರೆಗೆ ಇರಲಿದೆ. ದಟ್ಟವಾದ ಮಂಜಿನ ಸ್ಥಿತಿಯಿಂದ ದೇಶದಲ್ಲಿ ಹಲವಾರು ರೈಲುಗಳು ಮತ್ತು ವಿಮಾನಗಳ ಸಂಚಾರದಲ್ಲಿ ಅಡಚಣೆ ಉಂಟಾಯಿತು. ತೀವ್ರ ಮಂಜು ಮಸುಕಿದ ಹಿನ್ನೆಲೆಯಲ್ಲಿ ಸುಮಾರು ಐವತ್ತು ರೈಲುಗಳು ನವದೆಹಲಿ ರೈಲು ನಿಲ್ದಾಣದಲ್ಲಿ ವಿಳಂಬಗೊಂಡವು. ಈ ನಡುವೆ, ಮಂಜಿನಿಂದಾಗಿ ದೆಹಲಿಯ ಇಂದಿರಾಗಾಂಧಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಹಲವಾರು ವಿಮಾನಗಳ ಪ್ರಯಾಣದಲ್ಲಿ ವಿಳಂಬವಾಯಿತು.

<><*<><>*><>

ಪಂಜಾಬ್‌ನಲ್ಲಿ, ಪ್ರಧಾನ ಮಂತ್ರಿ ಯಶಸ್ವಿ ಯೋಜನೆಯಡಿ, ಇತರೆ ಹಿಂದುಳಿದ ವರ್ಗಗಳು, ಆರ್ಥಿಕವಾಗಿ ಹಿಂದುಳಿದ ವರ್ಗಗಳು ಮತ್ತು ಡಿನೋಟಿಫೈಡ್ ಮತ್ತು ಅಲೆಮಾರಿ ಬುಡಕಟ್ಟುಗಳ ವಿದ್ಯಾರ್ಥಿಗಳು ಈಗ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಬಹುದಾಗಿದೆ. ಈ ವರ್ಗಗಳ ವಿದ್ಯಾರ್ಥಿಗಳು ೨೦೨೪-೨೫ನೇ ಶೈಕ್ಷಣಿಕ ವರ್ಷಕ್ಕೆ ಅರ್ಜಿ ಸಲ್ಲಿಸಲು ರಾಜ್ಯ ಸರ್ಕಾರದ

ಡಾ.ಅಂಬೇಡ್ಕರ್ ವಿದ್ಯಾರ್ಥಿವೇತನ ಪೋರ್ಟಲ್ ಅನ್ನು ತೆರೆಯಲಾಗಿದೆ ಎಂದು ಪಂಜಾಬ್ ರಾಜ್ಯ ಸಾಮಾಜಿಕ ನ್ಯಾಯ, ಸಬಲೀಕರಣ ಮತ್ತು ಅಲ್ಪಸಂಖ್ಯಾತರ ಸಚಿವೆ ಡಾ.ಬಲ್ಜಿತ್ ಕೌರ್ ಹೇಳಿದ್ದಾರೆ.

<><*<><>*><>

ಪೋರಬಂದರ್ ವಿಮಾನನಿಲ್ದಾಣದ ರನ್‌ವೇಯಲ್ಲಿ ನಿನ್ನೆ ಭಾರತೀಯ ಕರಾವಳಿ ಪಡೆಯ ಹೆಲಿಕಾಪ್ಟರ್ ಒಂದು ಅಪಘಾತಕ್ಕೀಡಾಗಿ, ಅದರಲ್ಲಿದ್ದ ಮೂವರು ಸಿಬ್ಬಂದಿ ಸಾವನ್ನಪ್ಪಿದ್ದಾರೆ. ಎಂದಿನಂತೆ ತರಬೇತಿಯಲ್ಲಿ ನಿರತರಾಗಿದ್ದ ವೇಳೆ ಈ ಘಟನೆ ನಡೆದಿದ್ದು, ಈ ಸಂದರ್ಭದಲ್ಲಿ ಹೆಲಿಕೊಪ್ಟರ್‌ನಲ್ಲಿ ಇಬ್ಬರು ಪೈಲಟ್‌ಗಳು ಮತ್ತು ಒಬ್ಬ ಏರ್ ಕ್ರೂ ಡ್ರೈವರ್ ಇದ್ದರು.

<><*<><>*><>

ಕೋಲ್ಕತ್ತಾದ ವಿವೇಕಾನಂದ ಯುಬ ಭಾರತಿ ಕ್ರೀಡಾಂಗಣದಲ್ಲಿ ಇಂದು ಸಂಜೆ ನಡೆಯುವ ಇಂಡಿಯನ್ ಸೂಪರ್ ಲೀಗ್ ಫುಟ್‌ಬಾಲ್ ಪಂದ್ಯದಲ್ಲಿ ಈಸ್ಟ್ ಬೆಂಗಾಲ್ ಎಫ್‌ಸಿ ಹಾಗೂ ಮುಂಬೈ ಸಿಟಿ ಎಫ್‌ಸಿ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭:೩೦ಕ್ಕೆ ಪ್ರಾರಂಭವಾಗಲಿದೆ. ಮುಂಬೈ ಸಿಟಿ ಎಫ್‌ಸಿ ೧೩ ಪಂದ್ಯಗಳಿಂದ ೨೦ ಅಂಕ ಗಳಿಸಿ ಅಂಕಪಟ್ಟಿಯಲ್ಲಿ ಏಳನೇ ಸ್ಥಾನದಲ್ಲಿದೆ. ಮತ್ತೊಂದೆಡೆ, ಈಸ್ಟ್ ಬೆಂಗಾಲ್ ಎಫ್‌ಸಿ ೧೪ ಅಂಕಗಳನ್ನು ಪಡೆದುಕೊಂಡು ಅಂಕಪಟ್ಟಿಯಲ್ಲಿ ೧೧ನೇ ಸ್ಥಾನದಲ್ಲಿದೆ. ನವದೆಹಲಿಯ ಜವಾಹರಲಾಲ್ ನೆಹರು ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಪಂದ್ಯದಲ್ಲಿ ಕೇರಳ ಬ್ಲಾಸ್ಟರ್ಸ್‌ತಂಡ ೧-೦ ಗೋಲುಗಳಿಂದ ಪಂಜಾಬ್ ಎಫ್‌ಸಿ ತಂಡವನ್ನು ಸೋಲಿಸಿತು.

<><*<><>*><>

ಇಂಗ್ಲೆಂಡ್‌ನ ಬರ್ಮಿಂಗ್‌ಹ್ಯಾಮ್‌ನಲ್ಲಿ ನಡೆಯುತ್ತಿರುವ ಬ್ರಿಟಿಷ್ ಜೂನಿಯರ್ ಓಪನ್ ಸ್ಕ್ವಾಷ್ ಪಂದ್ಯಾವಳಿಯಲ್ಲಿ ಭಾರತದ ಅನಾಹತ್ ಸಿಂಗ್ ಫೈನಲ್‌ಗೆ ಪ್ರವೇಶಿಸಿದ್ದಾರೆ. ನಿನ್ನೆ ನಡೆದ ೧೭ ವರ್ಷದೊಳಗಿನ ಬಾಲಕಿಯರ ಸಿಂಗಲ್ಸ್ ಪ್ರಶಸ್ತಿ ಸುತ್ತಿನ ಸೆಮಿ ಫೈನಲ್‌ನಲ್ಲಿ ಅವರು ಈಜಿಪ್ಟ್‌ನ ರುಕಯ್ಯ ಽಸಲೇಂ ಅವರನ್ನು ೩-೧ ಅಂತರದಿಂದ ಸೋಲಿಸಿದರು. ಅನಾಹತ್ ಅಂತಿಮ ಹಣಾಹಣಿಯಲ್ಲಿ ಈಜಿಪ್ಟ್‌ನ ಮಲಿಕಾ ಎಲ್ ಕರಾಕ್ಸಿಯನ್ನು ಎದುರಿಸಲಿದ್ದಾರೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೨.೩೦ ಕ್ಕೆ <>*><>